ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**
ನೂರ ನಲವತ್ತೊಂದನೆಯ ಅಧಿವೇಶನ
ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ರಾಜ್ಯದಲ್ಲಿರುವ ನ್ಯಾಯಬೆಲೆ ಅಂಗಡಿಗಳ ಕಾರ್ಯನಿರ್ವಹಣೆ ಬಗ್ಗೆ

ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು) :-

233 (267) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ರಾಜ್ಯದಲ್ಲಿರುವ ಒಟ್ಟು ನ್ಯಾಯಬೆಲೆ ಅಂಗಡಿಗಳ ಸಂಖ್ಯೆ ಎಷ್ಟು; ಅದರಲ್ಲಿ ಬಿ.ಪಿ.ಎಲ್ ಹಾಗೂ ಎ.ಪಿ.ಎಲ್ ಕಾರ್ಡ್‌ಗಳ ಸಂಖ್ಯೆ ಎಷ್ಟು ; (ಜಿಲ್ಲಾವಾರು ವಿವರ ನೀಡುವುದು)

(ಆ) ನ್ಯಾಯಬೆಲೆ ಅಂಗಡಿ ಮುಖಾಂತರ ಪಡಿತದಾರರಿಗೆ ವಿತರಿಸಲಾಗುತ್ತಿರುವ ಆಹಾರ ಧಾನ್ಯಗಳು ಯಾವುವು ; ಹಾಗೂ ಇತರೆ ಯಾವ ವಸ್ತುಗಳನ್ನು ಪಡಿತದಾರರಿಗೆ ವಿತರಿಸಲಾಗುತ್ತಿದೆ; (ಜಿಲ್ಲಾವಾರು ಧಾನ್ಯವಾರು, ವಿತರಿಸುವ ವಸ್ತುವಾರು ಸಂಪೂರ್ಣ ವಿವರ ನೀಡುವುದು)

(ಇ) ಕೆಲವು ಜಿಲ್ಲೆಗಳಲ್ಲಿ ಕೆಲವು ನ್ಯಾಯಬೆಲೆ ಅಂಗಡಿಗಳಲ್ಲಿ ಪಡಿತರಿಗೆ ಸರಿಯಾಗಿ ಮಾಪನ ಮಾಡದೇ ಆಹಾರ ಧಾನ್ಯ ವಿತರಿಸುವುದು ಮತ್ತು ಕಳಪೆ ಮಟ್ಟದ ಆಹಾರ ಧಾನ್ಯ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಯಾವ ಯಾವ ಜಿಲ್ಲೆಯಲ್ಲಿ ಬಂದಿದೆ ; ಯಾವ ಕ್ರಮ ಕೈಗೊಳ್ಳ ಲಾಗಿದೆ ? (ವಿವರ ನೀಡುವುದು)